C.C.No.2725/2022
PW-9
CW-11

**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ. ಎಂ. ಎಫ್. ಸಿ., ಪಾವಗಡ ನ್ಯಾಯಾಲಯ**

**ಸಿ.ಸಿ. ಸಂಖ್ಯೆ 2725/2022**

**ಪ್ರಾಸಾಃ 9**

**ಚಾಸಾಃ 11**

**ದಿನಾಂಕ 28.07.2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

| | | |
|---|---|---|
| ಸಾಕ್ಷಿದಾರರ ಹೆಸರು | - | ವೇಣು |
| ತಂದೆಯ ಹೆಸರು | - | ಗಂಗಾಧರ |
| ವಯಸ್ಸು | - | 30 ವರ್ಷ |
| ವೃತ್ತಿ | - | ಕೂಲಿ |
| ವಾಸ ಸ್ಥಳ | - | ವೈ.ಎನ್.ಹೊಸಕೋಟೆ |

**ಮುಖ್ಯ ವಿಚಾರಣೆಃ ಮಾನ್ಯ ಎ.ಪಿ.ಪಿ ರವರಿಂದಃ**

ನನಗೆ ಚಾಸಾ-10 ರವರ ಪರಿಚಯವಿದೆ. ನನಗೆ ಆರೋಪಿಯ ಪರಿಚಯವಿಲ್ಲ. ಸಾಕ್ಷಿಗೆ ನಿಪಿ-2 ಸ್ಥಳ ಪಂಚನಾಮೆಯನ್ನು ತೋರಿಸಿ ಅದರಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿರುತ್ತಾರೆ ಅದನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು. ನಾನು ಸದರಿ ಸಹಿಯನ್ನು ಸುಮಾರು 4 ರಿಂದ 5 ವರ್ಷಗಳ ಹಿಂದೆ ಮಾಡಿರುತ್ತೇನೆ. ನಾನು ವೈ.ಎನ್ .ಹೊಸಕೋಟೆ ಪೋಲಿಸ್ ಠಾಣೆಯಲ್ಲಿ ಸದರಿ ಸಹಿಯನ್ನು ಮಾಡಿರುತ್ತೇನೆ. ಸದರಿ ಸಹಿಯನ್ನು ಯಾವ ವಿಚಾರಕ್ಕೆ ಸಹಿ ಮಾಡಿರುತ್ತೇನೆ ಎಂಬುದು ನನಗೆ ಗೊತ್ತಿಲ್ಲ. ನಿಪಿ-2 ಕ್ಕೆ ಚಾಸಾ-10 ರವರು ಕೂಡ ಸಹಿ ಮಾಡಿರುತ್ತಾರೆ. ನನಗೆ ನಿಪಿ-2 ರಲ್ಲಿರುವ ವಿಚಾರಗಳು ನನಗೆ ಗೊತ್ತಿಲ್ಲ. ನನ್ನ ಮುಂದೆ ಪೋಲಿಸಿನವರು ಯಾವುದೇ ಪಂಚನಾಮೆ ಜರುಗಿಸಿ ಯಾವುದೇ ವಸ್ತುಗಳನ್ನು ವಶಪಡಿಸಿಕೊಂಡಿಲ್ಲ. ಸಾಕ್ಷಿಗೆ ಮುದ್ದೆಮಾಲುಗಳನ್ನು ತೋರಿಸಲಾಗಿ ಇದೆ ಮೊದಲ ಬಾರಿಗೆ

ನೊಡಿರವುದಾಗಿ ನುಡಿಯುತ್ತಾರೆ.

(ಈ ಹಂತದಲ್ಲಿ ಮಾನ್ಯ ಅಭಿಯೋಜಕರು ಸಾಕ್ಷಿಯನ್ನು ಪೂರ್ಣ ಪ್ರಮಾಣದ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಕೋರಿದ್ದು ಅನುಮತಿಸಲಾಯಿತು)

ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ

ದಿನಾಂಕಃ 08-04-2022 ರಲ್ಲಿ ವೈ.ಎನ್.ಹೊಸಕೋಟೆ ಪೋಲಿಸ್ ಠಾಣೆಯಲ್ಲಿ ಪಂಚನಾಮೆ ಜರುಗಿಸಿದರು ಎಂದರೆ ಸರಿಯಲ್ಲ. ನನಗೆ ಪ್ರಕರಣದ ವಿಚಾರಗಳನ್ನು ತಿಳಿಸಿ ಪೋಲಿಸರು ನನ್ನ ಮತ್ತು ಚಾಸಾ-10 ರವರ ಸಮಕ್ಷಮ ಒಂದು ಕತ್ತರಿ ಮತ್ತು ಒಂದು ಓಪೋ ಮೊಬೈಲ್ ನ್ನು ಅಮಾನತ್ತುಪಡಿಸಿಕೊಂಡರು ಎಂದರೆ ಸರಿಯಲ್ಲ. ಸದರಿ ಪಂಚನಾಮೆ ಸಂಜೆ 5-40 ರಿಂದ 6-40 ರವರೆಗೆ ಜರುಗಿಸಿ ನನಗೆ ಪಂಚನಾಮೆಯನ್ನು ಓದಿ ತಿಳಿಸಿ ಸಹಿಯನ್ನು ಪಡೆದುಕೊಂಡಿದ್ದಾರೆ ಎಂದರೆ ಸರಿಯಲ್ಲ. ನನ್ನ ಮತ್ತು ಚಾಸಾ-10 ರವರ ಸಮಕ್ಷಮ ಒಂದು ಕತ್ತರಿ ಮತ್ತು ಒಂದು ಓಪೋ ಮೊಬೈಲ್ ನ್ನು ಅಮಾನತ್ತುಪಡಿಸಿಕೊಂಡರು ಸಹ ನಾನು ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃಇಲ್ಲ.

(ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚುಮಾಡಲಾಯಿತು.)

ಓ . ಹೇ. ಕೇ. ಸರಿ ಇದೆ.

ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ. ಎಫ್. ಸಿ.,
ಪಾವಗಡ